# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2343

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 21.03.2022

ಉತ್ತರಿಸುವ ಸಚಿವರು : ಅರಣ್ಯ ಮತ್ತು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯದಲ್ಲಿ ರಾಗಿ ಮತ್ತು ಜೋಳ ಖರೀದಿಗೆ (M.S.P.) ಬೆಂಬಲ ಬೆಲೆಯನ್ನು ಘೋಷಣೆ ಮಾಡಲಾಗಿದೆಯೇ; ಹಾಗಿದ್ದಲ್ಲಿ, ನಿಗಧಿಪಡಿಸಿರುವ ಬೆಂಬಲ ಬೆಲೆ ಎಷ್ಟು; (ವಿವರಗಳೊಂದಿಗೆ ಮಾಹಿತಿ ನೀಡುವುದು)</td><td>ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಕೇಂದ್ರ ಸರ್ಕಾರವು 2021-22 ನೇ ಸಾಲಿನಲ್ಲಿ ರಾಗಿ ಮತ್ತು ಜೋಳಕ್ಕೆ ಈ ಕೆಳಗಿನಂತೆ ದರ ನಿಗಧಿಪಡಿಸಿದೆ.
<table>
<tr><th colspan="2">ಬೆಳೆ</th><th>ದರ ಪ್ರತಿ ಕ್ವಿಂಟಾಲ್‌ಗೆ ರೂ. ಗಳಲ್ಲಿ</th></tr>
<tr><td rowspan="2">ಜೋಳ</td><td>Hybrid</td><td>2738</td></tr>
<tr><td>Maldandi</td><td>2758</td></tr>
<tr><td>ರಾಗಿ</td><td></td><td>3377</td></tr>
</table>
</td></tr>
<tr><td>ಆ</td><td>ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ರಾಗಿ ಮತ್ತು ಜೋಳವನ್ನು ಕಳೆದ 2020-21ನೇ ಸಾಲಿನಲ್ಲಿ ಬೆಂಬಲ (M.S.P.) ಬೆಲೆಯನ್ನು ನೀಡಿ ಖರೀದಿ ಮಾಡಲಾಗಿದೆಯೇ; ಮಾಡಿದ್ದಲ್ಲಿ, ಎಷ್ಟು; (ಜಿಲ್ಲಾವಾರು ಮತ್ತು ಬೆಳೆಯವಾರು ವಿವರ ನೀಡುವುದು)</td><td>2020-21 ನೇ ಸಾಲಿನಲ್ಲಿ ಬಳ್ಳಾರಿ (ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆ) ಜಿಲ್ಲೆಯಲ್ಲಿ ಖರೀದಿ ಮಾಡಲಾದ ರಾಗಿ ಮತ್ತು ಜೋಳವನ್ನು ಖರೀದಿ ವಿವರ ಈ ಕೆಳಕಂಡಂತಿದೆ.
<table>
<tr><th rowspan="2">ಬೆಳೆ</th><th colspan="2">ಖರೀದಿಸಿರುವ ಪ್ರಮಾಣ (ಕ್ವಿಂಟಾಲ್‌ಗಳಲ್ಲಿ)</th></tr>
<tr><th>ಬಳ್ಳಾರಿ</th><th>ವಿಜಯನಗರ</th></tr>
<tr><td>ರಾಗಿ</td><td>380.50</td><td>173560.75</td></tr>
<tr><td>ಜೋಳ</td><td>287094.70</td><td>14354.80</td></tr>
</table>
</td></tr>
<tr><td>ಇ</td><td>ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ 2021-22ನೇ ಸಾಲಿನಲ್ಲಿ ರಾಗಿ ಮತ್ತು ಜೋಳವನ್ನು ಬೆಂಬಲ ಬೆಲೆ (M.S.P.) ನೀಡಿ ಖರೀದಿ ಮಾಡಲಾಗುತ್ತಿದೆಯೇ; ಇಲ್ಲವಾದಲ್ಲಿ, ಖರೀದಿ ಮಾಡದಿರಲು ಕಾರಣಗಳೇನು; ಯಾವ ಕಾಲಮಿತಿಯಲ್ಲಿ ಖರೀದಿ ಮಾಡಲಾಗುವುದು; (ಮಾಹಿತಿ ನೀಡುವುದು)</td><td>ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ 2021-22ನೇ ಸಾಲಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರಾಗಿ ಮತ್ತು ಜೋಳವನ್ನು ಖರೀದಿಸಲು ಖರೀದಿ ಕೇಂದ್ರಗಳನ್ನು ತೆರೆಯಲಾಗಿದೆ. ರಾಜ್ಯದಲ್ಲಿ ರಾಗಿ ಖರೀದಿಗೆ ಸಂಬಂಧಿಸಿದಂತೆ ನಿಗಧಿಪಡಿಸಲಾದ 2.10 ಲಕ್ಷ ಮೆಟ್ರಿಕ್ ಟನ್ ಪ್ರಮಾಣಕ್ಕೆ ಈಗಾಗಲೇ ರೈತರು ನೋಂದಣಿ ಮಾಡಿಕೊಂಡಿರುವುದರಿಂದ ರೈತರ ನೊಂದಣಿಯನ್ನು ಸ್ಥಗಿತಗೊಳಿಸಲಾಗಿದೆ. ಜೋಳದ ಖರೀದಿಗೆ ಸಂಬಂಧಿಸಿದಂತೆ ರೈತರ ನೋಂದಣಿ ಹಾಗೂ ಸಂಗ್ರಹಣೆ ಕಾರ್ಯ 30.03.2022 ರವರೆಗೆ ಪ್ರಗತಿಯಲ್ಲಿರುತ್ತದೆ.</td></tr>
</table>

| | | |
|---|---|---|
| ಈ | ರಾಜ್ಯದಲ್ಲಿ ಬೆಂಬಲ ಬೆಲೆಯನ್ನು ನೀಡಿ ಆಹಾರ ಧಾನ್ಯಗಳನ್ನು ಖರೀದಿ ಮಾಡಲು ಸರ್ಕಾರದ ಮಾನದಂಡಗಳೇನು; ಯಾವ ಸಂದರ್ಭದಲ್ಲಿ ಮತ್ತು ಯಾವ ತಿಂಗಳುಗಳಲ್ಲಿ ಖರೀದಿ ಮಾಡಲಾಗುವುದು? (ಸರ್ಕಾರಿ ಆದೇಶದ ಪ್ರತಿಗಳೊಂದಿಗೆ ವಿವರ ನೀಡುವುದು) | 2021-22 ನೇ ಸಾಲಿನ ಮುಂಗಾರು ಋತುವಿನಲ್ಲಿ ಕೇಂದ್ರ ಸರ್ಕಾರವು ಅನುಮತಿಸಿರುವಂತೆ 5.00 ಲಕ್ಷ ಮೆಟ್ರಿಕ್ ಟನ್ ಭತ್ತವನ್ನು ಪ್ರತಿ ರೈತರಿಂದ ಉತ್ಪಾದನೆಗೆ ಅನುಗುಣವಾಗಿ ಪ್ರತಿ ಎಕರೆಗೆ 25 ಕ್ವಿಂಟಾಲ್‌ನಂತೆ ಗರಿಷ್ಠ 40 ಕ್ವಿಂಟಾಲ್ ಪ್ರಮಾಣವನ್ನು ಖರೀದಿಸಲಾಗುತ್ತಿದೆ. ರಾಜ್ಯದ ಸಣ್ಣ ಮತ್ತು ಅತೀ ಸಣ್ಣ ರೈತರಿಂದ ಪ್ರತಿ ಎಕರೆಗೆ 10 ಕ್ವಿಂಟಾಲ್‌ನಂತೆ ಗರಿಷ್ಠ 20 ಕ್ವಿಂಟಾಲ್‌ನಂತೆ 2.10 ಲಕ್ಷ ಮೆಟ್ರಿಕ್ ಟನ್ ರಾಗಿಯನ್ನು ಹಾಗೂ 1.10 ಲಕ್ಷ ಮೆಟ್ರಿಕ್ ಟನ್ ಜೋಳವನ್ನು ರೈತರು ಹೊಂದಿರುವ ಜಮೀನಿಗೆ ಅನುಗುಣವಾಗಿ ಪ್ರತಿ ಎಕರೆಗೆ 10 ಕ್ವಿಂಟಾಲ್‌ನಂತೆ ಗರಿಷ್ಠ ಮಿತಿಯಿಲ್ಲದೆ ಜೋಳವನ್ನು ಖರೀದಿಸಲಾಗುತ್ತದೆ. ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ವಯ ಜನವರಿ ಮಾಹೆಯಿಂದ ಮಾರ್ಚ್ ಅಂತ್ಯದವರೆಗೆ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರಾಜ್ಯದ ರೈತರಿಂದ ಆಹಾರ ಧಾನ್ಯಗಳನ್ನು ಖರೀದಿ ಮಾಡಲಾಗುತ್ತದೆ. (ಆದೇಶದ ಪ್ರತಿಗಳನ್ನು ಒದಗಿಸಲಾಗಿದೆ.) |

ಆನಾಸ 72 ಆರ್‌ಪಿಆರ್ 2022 (ಇ-ಆಫೀಸ್)

(ಉಮೇಶ ವಿ. ಕತ್ತಿ)

ಅರಣ್ಯ ಮತ್ತು ಆಹಾರ, ನಾಗರಿಕ ಸರಬರಾಜು
ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2021-22ನೇ ಸಾಲಿನ ಮುಂಗಾರು ಋತುಮಾನದಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರಾಜ್ಯದ ರೈತರಿಂದ ಭತ್ತ ಖರೀದಿ ಮಾಡುವ ಬಗ್ಗೆ.

**ಓದಲಾಗಿದೆ:**-1.ಕೇಂದ್ರ ಸರ್ಕಾರದ ಪತ್ರ ಸಂಖ್ಯೆ:3(19)/2020-ಪಿವೈ-I, ದಿನಾಂಕ: 16.06.2021

2.ಕೇಂದ್ರ ಸರ್ಕಾರದ ಪತ್ರ ಸಂಖ್ಯೆ:3(13)/2021-ಪಿವೈ-I, ದಿನಾಂಕ:17.08.2021

3.ಸರ್ಕಾರದ ಆದೇಶ ಸಂಖ್ಯೆ:ಆನಾಸ 101 ಆರ್‌ಪಿಆರ್ 2021, ದಿನಾಂಕ:16.11.2021

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಸಂಖ್ಯೆ(1) ಪತ್ರದಲ್ಲಿ ಕೇಂದ್ರ ಸರ್ಕಾರವು 2021-22ನೇ ಸಾಲಿಗೆ ರೈತರಿಂದ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಖರೀದಿಸುವ ಭತ್ತ ರಾಗಿ ಮತ್ತು ಬಿಳಿಜೋಳ ಆಹಾರಧಾನ್ಯಗಳಿಗೆ ಈ ಕೆಳಕಂಡಂತೆ ದರ ನಿಗದಿಪಡಿಸಿದೆ.

| ಕ್ರ.ಸಂ | ಧಾನ್ಯ | ದರ (ಪ್ರತಿ ಕ್ವಿಂಟಾಲ್ ಗೆ) ರೂ.ಗಳಲ್ಲಿ |
|---|---|---|
| 1 | ಭತ್ತ –ಸಾಮಾನ್ಯ | 1940-00 |
| 2 | ಭತ್ತ ಗ್ರೇಡ್-ಎ | 1960-00 |

ಮೇಲೆ ಓದಲಾದ (2)ರಲ್ಲಿನ ಪತ್ರದಲ್ಲಿ, ಕೇಂದ್ರ ಸರ್ಕಾರವು 2021-22 ನೇ ಸಾಲಿನ ಮುಂಗಾರು ಋತುಮಾನದಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರಾಜ್ಯದ ರೈತರಿಂದ 3.35 ಲಕ್ಷ ಮೆಟ್ರಿಕ್ ಟನ್ ಸಿ.ಎಂ.ಆರ್ ಅಕ್ಕಿಯನ್ನು ಅಂದರೆ 5 ಲಕ್ಷ ಮೆಟ್ರಿಕ್ ಟನ್ ಭತ್ತವನ್ನು ಖರೀದಿಸಲು ಅನುಮತಿಯನ್ನು ನೀಡಿದೆ.

ಮೇಲೆ ಓದಲಾದ (3)ರಲ್ಲಿನ ಆದೇಶದಲ್ಲಿ 2021-22 ನೇ ಸಾಲಿನ ಮುಂಗಾರು ಋತುಮಾನದಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಭತ್ತವನ್ನು ಮಾರಾಟ ಮಾಡಲು ಇಚ್ಛೆಯನ್ನು ವ್ಯಕ್ತಪಡಿಸುವ ರಾಜ್ಯದ ಎಲ್ಲಾ ಜಿಲ್ಲೆಗಳ ರೈತರ ನೋಂದಣಿ ಕಾರ್ಯವನ್ನು ತಕ್ಷಣದಿಂದ ಜಾರಿಗೆ ಬರುವಂತೆ ರೈತರ ನೋಂದಣಿ ಕಾರ್ಯವನ್ನು ಖರೀದಿ ಏಜೆನ್ಸಿಗಳ ಮುಖಾಂತರ ಪ್ರಾರಂಭಿಸಲು ಆದೇಶಿಸಲಾಗಿದೆ.

2021-22ನೇ ಸಾಲಿನ ಮುಂಗಾರು ಋತುಮಾನದಲ್ಲಿ ರೈತರು ಬೆಳೆದಿರುವ ಆಹಾರ ಧಾನ್ಯಗಳ ಸಂಗ್ರಹಣೆಗೆ ಈಗಾಗಲೇ ಕೃಷಿ ಇಲಾಖೆಯಿಂದ ಜಾರಿಗೊಳಿಸಿರುವ "ಫ್ರೂಟ್ಸ್" ದತ್ತಾಂಶದಿಂದ ರೈತರ ಮಾಹಿತಿಯನ್ನು ನೇರವಾಗಿ ಪಡೆದು ಕೃಷಿ ಇಲಾಖೆ ಒದಗಿಸಿರುವ ಸರಾಸರಿ ಬೆಳೆ ಮಾಹಿತಿಯನ್ವಯ ಹಾಗೂ ಕೇಂದ್ರ ಸರ್ಕಾರದ ಮಾರ್ಗ ಸೂಚಿಗಳನ್ವಯ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ನೋಂದಣಿ ಮಾಡಿದಂತಹ ರೈತರಿಂದ ಭತ್ತವನ್ನು ಸಂಗ್ರಹಣಾ ಏಜೆನ್ಸಿಗಳಾದ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ ಮತ್ತು ಕರ್ನಾಟಕ ಸಹಕಾರ ಮಾರಾಟ ಮಹಾಮಂಡಳಗಳು ಸರ್ಕಾರವು ನಿಗಧಿಪಡಿಸುವ ಅಕ್ಕಿ ಗಿರಣಿಗಳ ಮೂಲಕ ನೇರವಾಗಿ ಖರೀದಿಸಲು ಅನುಮತಿಯನ್ನು ನೀಡಲು ತೀರ್ಮಾನಿಸಿದೆ. ಅದರಂತೆ, ಈ ಕೆಳಕಂಡ ಆದೇಶ:

**ಸರ್ಕಾರದ ಆದೇಶ ಸಂಖ್ಯೆ: ಆನಾಸ 57 ಆರ್ ಪಿಆರ್ 2021(ಇ-ಆಫೀಸ್)**

**ಬೆಂಗಳೂರು, ದಿನಾಂಕ:10.12.2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ 2021-22 ನೇ ಸಾಲಿನ ರೈತರಿಂದ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಕೇಂದ್ರ ಸರ್ಕಾರವು ನಿಗಧಿಪಡಿಸಿರುವ 3.35 ಲಕ್ಷ ಮೆಟ್ರಿಕ್ ಟನ್ ಸಿ.ಎಂ.ಆರ್ ಅಕ್ಕಿಯನ್ನು ಅಂದರೆ 5 ಲಕ್ಷ ಮೆಟ್ರಿಕ್ ಟನ್ ಭತ್ತವನ್ನು ಸಾಮಾನ್ಯ ಭತ್ತ ಪ್ರತಿ ಕ್ವಿಂಟಾಲ್ ಗೆ ರೂ.1940 ದರದಲ್ಲಿ ಹಾಗೂ ಗ್ರೇಡ್-ಎ ಭತ್ತವನ್ನು ಪ್ರತಿ ಕ್ವಿಂಟಾಲ್‌ಗೆ ರೂ. 1960 ರ ದರದಲ್ಲಿ ಖರೀದಿಸಲು ಆದೇಶಿಸಿದೆ.

2021-22 ನೇ ಸಾಲಿಗೆ ರೈತರಿಂದ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಭತ್ತವನ್ನು ಖರೀದಿಸಲು ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮತ ಮತ್ತು ಕರ್ನಾಟಕ ರಾಜ್ಯ ಸಹಕಾರ ಮಾರುಕಟ್ಟೆ ಮಹಾ ಮಂಡಳಿ ಗಳನ್ನು ಸಂಗ್ರಹಣಾ ಏಜೆನ್ಸಿಗಳನ್ನಾಗಿ ನೇಮಿಸಿದ್ದು, ಈ ಕೆಳಕಂಡಂತೆ ಜಿಲ್ಲೆಗಳನ್ನು ಹಂಚಿಕೆ ಮಾಡಲಾಗಿದೆ. ಆಯಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ನೀಡುವ ಸೂಚನೆ/ಆದೇಶಗಳನ್ವಯ ಖರೀದಿ ಪ್ರಕ್ರಿಯೆಯನ್ನು ಕೈಗೊಳ್ಳಲು ಆದೇಶಿಸಿದೆ.

| ಕ್ರ.ಸಂ | ಸಂಗ್ರಹಣಾ ಸಂಸ್ಥೆ | ನಿಯೋಜಿಸಿರುವ ಜಿಲ್ಲೆ |
|---|---|---|
| 1 | ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ | ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಕೋಲಾರ, ಶಿವಮೊಗ್ಗ, ರಾಮನಗರ, ಚಿಕ್ಕಬಳ್ಳಾಪುರ, ರಾಯಚೂರು, ಹಾವೇರಿ, ಕೊಪ್ಪಳ, ವಿಜಯಪುರ, ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ, ದಾವಣಗೆರೆ, ಬಾಗಲಕೋಟೆ, ತುಮಕೂರು, ಚಿತ್ರದುರ್ಗ, ಕಲಬುರಗಿ, ಬಳ್ಳಾರಿ, ಬೀದರ್, ಯಾದಗಿರಿ. |
| 3 | ಕರ್ನಾಟಕ ರಾಜ್ಯ ಸಹಕಾರ ಮಾರುಕಟ್ಟೆ ಮಹಾಮಂಡಳಿ | ಹಾಸನ, ಬೆಳಗಾವಿ, ಧಾರವಾಡ, ಕೊಡಗು, ಗದಗ ಚಿಕ್ಕಮಗಳೂರು, ಚಾಮರಾಜನಗರ, ಮಂಡ್ಯ ಮತ್ತು ಮೈಸೂರು |

3. ಆಯಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಸದರಿ ಜಿಲ್ಲೆಯಲ್ಲಿ ಕಾರ್ಯನಿರತವಾಗಿರುವ ಅಕ್ಕಿಗಿರಣಿಗಳನ್ನು ಭತ್ತ ಖರೀದಿ ಕಾರ್ಯಕ್ಕೆ ನೋಂದಾಯಿಸಿಕೊಂಡು ಅಕ್ಕಿಗಿರಣಿಗಳ ಹಲ್ಲಿಂಗ್ ಹಾಗೂ ಶೇಖರಣಾ ಸಾಮರ್ಥ್ಯಕ್ಕನುಗುಣವಾಗಿ ಸಂಗ್ರಹಣಾ ಕಾರ್ಯವನ್ನು ಮಾಡತಕ್ಕದ್ದು. ಒಂದು ಪಕ್ಷ ಜಿಲ್ಲೆಯಲ್ಲಿ ಕಾರ್ಯನಿರತ ಅಕ್ಕಿಗಿರಣಿಗಳು ಅಸ್ತಿತ್ವದಲ್ಲಿ ಇಲ್ಲದ ಪಕ್ಷದಲ್ಲಿ ಪಕ್ಕದ ಜಿಲ್ಲೆಗಳ ಅಕ್ಕಿಗಿರಣಿ ಮೂಲಕ ಸಂಗ್ರಹಣೆ ಕಾರ್ಯವನ್ನು ನಿರ್ವಹಿಸುವುದು. ಸದರಿ ಕಾರ್ಯಕ್ಕೆ ಅವಶ್ಯವಿರುವ ದತ್ತಾಂಶವನ್ನು ಆಯುಕ್ತರು, ಆಹಾರ ನಾಗರಿಕ ಸಬರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಇವರು ಎನ್.ಐ ಸಿ ಸಹಯೋಗದೊಂದಿಗೆ ಸಿದ್ಧಪಡಿಸತಕ್ಕದ್ದು. ಹಾಗೂ ಕೇಂದ್ರ ಸರ್ಕಾರದ ಪೋರ್ಟಲ್ ನಲ್ಲಿ ಅಗತ್ಯ ದತ್ತಾಂಶವನ್ನು ದಾಖಲಿಸತಕ್ಕದ್ದು. ಜಿಲ್ಲೆಗಳ ಜಿಲ್ಲಾಧಿಕಾರಿಗಳು ಭತ್ತದ ಗುಣಮಟ್ಟವನ್ನು ಕೃಷಿ ಇಲಾಖೆಯು ನೇಮಿಸುವ ಗ್ರೇಡರ್‌ಗಳ ಮುಖಾಂತರ ಪ್ರಮಾಣೀಕರಿಸತಕ್ಕದ್ದು. .

2021-22 ನೇ ಸಾಲಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಭತ್ತ, ಖರೀದಿಗಾಗಿ ಈ ಕೆಳಕಂಡಂತೆ ವೇಳಾಪಟ್ಟಿಯನ್ನು ನಿಗಧಿಪಡಿಸಲಾಗಿದೆ;

| ಕ್ರ.ಸಂ. | ವಿಷಯ | ಅವಧಿ |
|---|---|---|
| 1 | ಜಿಲ್ಲಾ ಮಟ್ಟದ ಟಾಸ್ಕ್‌ಫೋರ್ಸ್ ರಚನೆ ಮತ್ತು ಮೊದಲ ಸಭೆ | 13.12.2021 ರಿಂದ 18.12.2021 |
| 2 | ಜಿಲ್ಲಾ ಮಟ್ಟದಲ್ಲಿ ಗುಣಮಟ್ಟ ಪರಿಶೀಲನೆಗಾಗಿ ಅಸ್ಸೇಯರ್ ನೇಮಕಾತಿ ಮತ್ತು ತರಬೇತಿ | 18.12.2021 ರಿಂದ 19.12.2021 |

| | | |
|---|---|---|
| 3 | ಜಿಲ್ಲಾ ಮಟ್ಟದಲ್ಲಿ ಅಕ್ಕಿ ಗಿರಣಿಗಳ ಹಲ್ಲಿಂಗ್ ಸಾಮರ್ಥ್ಯ ಹಾಗೂ ಭತ್ತ ಸಂಗ್ರಹಣೆ ಸಾಮರ್ಥ್ಯದ ವಿವರಗಳನ್ನು ಪಡೆದು ನೋಂದಣಿ ಕಾರ್ಯ | 18.12.2021 ರಿಂದ 25.12.2021 |
| 4 | ಬೆಂಬಲ ಬೆಲೆ ಯೋಜನೆಯಡಿ ಭತ್ತ ಖರೀದಿ ಬಗ್ಗೆ ಜಿಲ್ಲಾ ವ್ಯಾಪ್ತಿಯಲ್ಲಿ ರೈತರಿಗೆ ಅಗತ್ಯ ಪ್ರಚಾರ | 11.12.2021 ರಿಂದ 31.12.2021 |
| 5 | 2021-22 ರ ರೈತರ ನೋಂದಣಿ ಪ್ರಾರಂಭ | 12.11.2021 ರಿಂದ 30.12.2021 |
| 6 | ಅಕ್ಕಿ ಗಿರಣಿಗಳಿಂದ ನೋಂದಣಿ ವಿವರಕ್ಕನುಗುಣವಾಗಿ ಗಿರಣಿಗಳಲ್ಲಿ ಸಂಗ್ರಹಣೆ ಹಾಗೂ ಇತರೆ ವ್ಯವಸ್ಥೆಗಳಿಗೆ ಕಾಲಾವಕಾಶ | 25.12.2021 ರಿಂದ 30.12.2021 |
| 7 | ನೋಂದಾಯಿತ ರೈತರಿಂದ ಭತ್ತವನ್ನು ಖರೀದಿಸಿ ಮಿಲ್‌ಗಳಲ್ಲಿ ಶೇಖರಿಸುವ ಮತ್ತು ಪರಿವರ್ತಿಸುವ ಕಾರ್ಯಾರಂಭ ಮತ್ತು ಮುಕ್ತಾಯ | 01.01.2022 ರಿಂದ 30.03.2022 |

## ಭತ್ತ ಖರೀದಿಗೆ ಮಾರ್ಗಸೂಚಿಗಳು

1. ನೋಂದಣಿ ಮಾಡಿದ ರೈತರು ಇಲಾಖೆಯಿಂದ ಕಳುಹಿಸುವ ಎಸ್.ಎಂ.ಎಸ್ ಆಧಾರದ ಮೇಲೆ ಸಂಬಂಧಪಟ್ಟ ಅಕ್ಕಿ ಗಿರಣಿಗಳಿಗೆ ಭತ್ತದ ಮಾದರಿಯ (Sample)ನ್ನು ಕಡ್ಡಾಯವಾಗಿ ನೀಡತಕ್ಕದ್ದು.
2. ಸಾಮಾನ್ಯ ಭತ್ತವನ್ನು ಪ್ರತಿ ರೈತರಿಂದ ಉತ್ಪಾದನೆಗೆ ಅನುಗುಣವಾಗಿ ಪ್ರತಿ ಎಕರೆಗೆ 25 ಕ್ವಿಂ.ನಂತೆ ಹಾಗೂ ಗರಿಷ್ಠ 40 ಕ್ವಿಂಟಾಲ್ ಮೀರದಂತೆ ಖರೀದಿಸತಕ್ಕದ್ದು.
3. ಅಕ್ಕಿ ಗಿರಣಿ ಮಾಲೀಕರು ರೈತರಿಂದ ಸ್ವೀಕರಿಸಿದ ಭತ್ತದ ಮಾದರಿಯ (Sample)ನ್ನು ಸಂಗ್ರಹಣಾ ಏಜೆನ್ಸಿಗಳಿಂದ ನೇಮಕ ಮಾಡುವ ಗುಣಮಟ್ಟ ಪರಿಶೀಲನಾ ಅಧಿಕಾರಿಯ ಮೂಲಕ ಗುಣಮಟ್ಟ ದೃಢೀಕರಣ ಪಡೆದ ನಂತರವೇ ಭತ್ತವನ್ನು ಖರೀದಿಸಿ ಸಂಗ್ರಹಣೆ ಮಾಡತಕ್ಕದ್ದು.
4. ಭತ್ತವನ್ನು ರೈತರು ತಮ್ಮ ಚೀಲಗಳಲ್ಲಿ ತಂದು ಅಕ್ಕಿ ಗಿರಣಿಗೆ ಸಲ್ಲಿಸಿದಾಗ ಪ್ರತಿ ಕ್ವಿಂಟಾಲ್ ಚೀಲಕ್ಕೆ ರೂ.6/- ರಂತೆ ಖರೀದಿ ಏಜೆನ್ಸಿಗಳು ಪಾವತಿ ಮಾಡತಕ್ಕದ್ದು.
5. ರೈತರಿಂದ ಭತ್ತವನ್ನು ಪಡೆದ ನಂತರ ಅಕ್ಕಿ ಗಿರಣಿ ಮಾಲೀಕರು ಸದರಿ ಮಾಹಿತಿಯನ್ನು ಆನ್‌ಲೈನ್‌ನಲ್ಲಿ ನಮೂದಿಸಬೇಕು. ಹೀಗೆ ನಮೂದಿಸುವಾಗ ಗುಣಮಟ್ಟ ಪರಿಶೀಲನಾ ಅಧಿಕಾರಿ ನೀಡಿರುವ ಒಪ್ಪಿಗೆ ಪತ್ರವನ್ನು ಆನ್ ಲೈನ್ ನಲ್ಲಿ ಸ್ಕ್ಯಾನ್ ಮಾಡಿ ಅಪ್ ಲೋಡ್ ಮಾಡತಕ್ಕದ್ದು.
6. ಅಕ್ಕಿ ಗಿರಣಿ ಮಾಲೀಕರಿಂದ ಭತ್ತದ ವಿವರ ಲಭ್ಯವಾದ ತಕ್ಷಣ ಖರೀದಿ ಏಜೆನ್ಸಿಗಳು ಭತ್ತವನ್ನು ಸರಬರಾಜು ಮಾಡಿದ ರೈತರಿಗೆ 15 ದಿನದೊಳಗಾಗಿ ಅವರ ಬ್ಯಾಂಕ್ ಖಾತೆಗಳಿಗೆ ಹಣವನ್ನು ವರ್ಗಾವಣೆ ಮಾಡತಕ್ಕದ್ದು.

7. ಯಾವುದೇ ಜಿಲ್ಲೆಯಲ್ಲಿ ಅಕ್ಕಿ ಗಿರಣಿಗಳು ನೋಂದಾಯಿಸದಿದ್ದಲ್ಲಿ, ಪಕ್ಕ ಜಿಲ್ಲೆಯ ಅಕ್ಕಿ ಗಿರಣಿಗಳನ್ನು ಕೂಡ ರೈತರಿಂದ ಖರೀದಿಗೆ ಹತ್ತಿರವಾಗುವಂತೆ ಗಣನೆಗೆ ತೆಗೆದುಕೊಂಡು ನೋಂದಾಯಿಸಲು ಅವಕಾಶ ನೀಡುವುದು. ಅದರಂತೆ, ಅಕ್ಕಿ ಗಿರಣಿಗಳನ್ನು ಗುರುತಿಸಲು ಕ್ರಮವಹಿಸುವುದು ಹಾಗೂ ಒಂದು ಅಕ್ಕಿ ಗಿರಣಿಗೆ ಒಂದಕ್ಕಿಂತ ಹೆಚ್ಚು ಜಿಲ್ಲೆಯಲ್ಲಿ ನೋಂದಾಯಿಸಲು ಕೂಡ ಅವಕಾಶ ನೀಡುವುದು.

8. ಜಿಲ್ಲೆಗಳಲ್ಲಿ ಯಾವುದೇ ಅಕ್ಕಿ ಗಿರಣಿಗಳು ನೋಂದಣಿ ಮಾಡದಿದ್ದಲ್ಲಿ , ಪಕ್ಕದ ಜಿಲ್ಲೆಯ ಹತ್ತಿರದ ಅಕ್ಕಿ ಗಿರಣಿಗೆ ಭತ್ತವನ್ನು ಸಾಗಾಣಿಕೆ ಮಾಡಿದ್ದಲ್ಲಿ, ಅಂತಹ ಸಾಗಾಣಿಕಾ ವೆಚ್ಚವನ್ನು ಸಾರ್ವಜನಿಕ ವಿತರಣಾ ಪದ್ಧತಿಯ ನಿರ್ಧರಿತ ದರದಂತೆಯೇ ಜಿಲ್ಲಾ ಖರೀದಿ ಏಜೆನ್ಸಿಯ ಮೂಲಕ ರೈತರಿಗೆ ಪಾವತಿಸುವುದು.

9. ಅಕ್ಕಿ ಗಿರಣಿಗಳಲ್ಲಿ ಖರೀದಿ ಸಂದರ್ಭದಲ್ಲಿ ರೈತರಿಂದ ಬಂದಿರುವ ಭತ್ತದ ಗುಣಮಟ್ಟದಲ್ಲಿ ಯಾವುದೇ ಗೊಂದಲುಗಳು ಉದ್ಭವಿಸಿದ್ದಲ್ಲಿ ಜಿಲ್ಲಾ ಟಾಸ್ಕ್ ಫೋರ್ಸ್ ನ ಗ್ರೇಡರ್ ಮೌಲ್ಯ ಮಾಪನದ ಮೂಲಕ ಬಗೆಹರಿಸುವುದು.

10. ರಾಜ್ಯದಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯ ಅನುಷ್ಠಾನದಲ್ಲಿ ಅಪರ ನಿರ್ದೇಶಕರು-1, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಇವರು ರಾಜ್ಯ ಮಟ್ಟದ ನೋಡಲ್ ಅಧಿಕಾರಿಯಾಗಿ ಕಾರ್ಯನಿರ್ವಹಿಸಲು ನೇಮಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಪಿ.ವೆಂಕಟೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ
ಆಹಾರ ನಾಗರಿಕ ಸರಬರಾಜು ಗ್ರಾಹಕರ ವ್ಯವಹಾರಗಳ
ಮತ್ತು ಕಾನೂನು ಮಾಪನಶಾಸ್ತ್ರ ಇಲಾಖೆ,

1. ಪ್ರಧಾನ ಮಹಾಲೇಖಪಾಲರರು (ಎ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329,ಬೆಂಗಳೂರು-560001.
2. ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
3. ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಹಕಾರ ಇಲಾಖೆ, ಬಹು ಮಹಡಿ ಕಟ್ಟಡ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿ, ಕೃಷಿ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಆಯುಕ್ತರು, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಬೆಂಗಳೂರು.
7. ಎಲ್ಲಾ ಜಿಲ್ಲಾಧಿಕಾರಿಗಳು.
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ, ಬೆಂಗಳೂರು.
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಮಾರುಕಟ್ಟೆ ಮಹಾಮಂಡಳಿ, ಬೆಂಗಳೂರು

10. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿ, ರಾಜಭವನ ರಸ್ತೆ, ಬೆಂಗಳೂರು.

11. ವ್ಯವಸ್ಥಾಪಕ ನಿರ್ದೇಶಕರು (ಕೆ.ಟಿ.ಕೆ), ಭಾರತ ಆಹಾರ ನಿಗಮ, ಬೆಂಗಳೂರು.

12. ಸಂಬಂಧಪಟ್ಟ ಜಿಲ್ಲೆಯ ಜಂಟಿ ನಿರ್ದೇಶಕರು /ಉಪ ನಿರ್ದೇಶಕರು , ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, (ಆಯುಕ್ತರು, ಆನಾಸ & ಗ್ರಾವ್ಯ ಇಲಾಖೆ ಇವರ ಮುಖಾಂತರ)

13. ಸಂಬಂಧಪಟ್ಟ ಜಿಲ್ಲೆಯ ವ್ಯವಸ್ಥಾಪಕರು, ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ, (ವ್ಯವಸ್ಥಾಪಕ ನಿರ್ದೇಶಕರು ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ, ಬೆಂಗಳೂರು ಇವರ ಮುಖಾಂತರ)

14. ಶಾಖಾ ರಕ್ಷಾ ಕಡತ /ಹೆಚ್ಚುವರಿ ಪ್ರತಿ.

15. **ಪ್ರತಿ ಮಾಹಿತಿಗಾಗಿ:**

1. ಸನ್ಮಾನ್ಯ ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿಗಳ, ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ**: 2021-22ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಬಿಳಿಜೋಳ ಖರೀದಿಸುವ ಬಗ್ಗೆ.

**ಓದಲಾದ**:-1. ಸರ್ಕಾರದ ಆದೇಶ ಸಂಖ್ಯೆ: ಆನಾಸ 57 ಆರ್‌ಪಿಆರ್ 2021, ಭಾ-2, ದಿನಾಂಕ: 14.12.2021.

2. ಸರ್ಕಾರದ ಆದೇಶ ಸಂಖ್ಯೆ:ಆನಾಸ 57 ಆರ್‌ಪಿಆರ್ 2021,ಭಾ-2, ದಿನಾಂಕ: 28.01.2022

**ಪ್ರಸ್ತಾವನೆ**:

ಮೇಲೆ ಓದಲಾದ ಕ್ರಮಸಂಖ್ಯೆ(1) ಸರ್ಕಾರದ ಆದೇಶದಲ್ಲಿ ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ವಯ 2021-22 ನೇ ಸಾಲಿನ ಮುಂಗಾರು ಋತುವಿನಲ್ಲಿ ರೈತರಿಂದ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರಾಗಿ ಮತ್ತು ಬಿಳಿಜೋಳ ಖರೀದಿಸಲು ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮಸಂಖ್ಯೆ(2) ಸರ್ಕಾರದ ಆದೇಶದಲ್ಲಿ, ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ವಯ ರಾಜ್ಯದ ಎಲ್ಲಾ ರೈತರಿಂದ ಪ್ರತಿ ಎಕರೆಗೆ 10 ಕ್ವಿಂಟಾಲ್‌ನಂತೆ ಗರಿಷ್ಠ 20 ಕ್ವಿಂಟಾಲ್ ಜೋಳವನ್ನು ಖರೀದಿಸಲು ಆದೇಶಿಸಲಾಗಿದೆ.

2021-22 ನೇ ಸಾಲಿನಲ್ಲಿ ಕೇಂದ್ರ ಸರ್ಕಾರವು ನಿಗದಿಪಡಿಸಿರುವ 1.10 ಲಕ್ಷ ಮೆಟ್ರಿಕ್ ಟನ್ ಪ್ರಮಾಣದ ಜೋಳದ ಸಂಗ್ರಹಣಾ ಗುರಿಯನ್ನು ತಲುಪಲು ಉದ್ದೇಶಿಸಿದ್ದು, ಈ ಹಿನ್ನೆಲೆಯಲ್ಲಿ ಪ್ರತಿ ರೈತರಿಂದ ಜೋಳ ಖರೀದಿಗೆ ನಿಗದಿಪಡಿಸಿರುವ 20 ಕ್ವಿಂಟಾಲ್ ಗರಿಷ್ಠ ಮಿತಿಯನ್ನು ತೆರವುಗೊಳಿಸಿ, ಪ್ರತಿ ರೈತರಿಂದ ಪ್ರತಿ ಎಕರೆಗೆ 10 ಕ್ವಿಂಟಾಲ್‌ನಂತೆ ರೈತರು ಹೊಂದಿರುವ ಜಮೀನಿಗೆ ಅನುಗುಣವಾಗಿ ಜೋಳವನ್ನು ಖರೀದಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ, ಈ ಕೆಳಕಂಡ ಆದೇಶ:

**ಸರ್ಕಾರದ ಆದೇಶ ಸಂಖ್ಯೆ: ಆನಾಸ 57 ಆರ್‌ಪಿಆರ್ 2021 ಭಾ-1(ಇ-ಆಫೀಸ್)**

**ಬೆಂಗಳೂರು, ದಿನಾಂಕ: 10.02.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2021-22 ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಜೋಳ ಸಂಗ್ರಹಣೆಗೆ ಸಂಬಂಧಿಸಿದಂತೆ, ಕೇಂದ್ರ ಸರ್ಕಾರವು ನಿಗದಿಪಡಿಸಿರುವ 1.10 ಲಕ್ಷ ಮೆಟ್ರಿಕ್ ಟನ್ ಪ್ರಮಾಣದ ಜೋಳದ ಸಂಗ್ರಹಣಾ ಗುರಿಯನ್ನು ತಲುಪುವ ಸಾಧ್ಯವಾಗುವಂತೆ ಪ್ರತಿ ರೈತರಿಂದ ಜೋಳ ಖರೀದಿಗೆ ನಿಗದಿಪಡಿಸಿರುವ 20 ಕ್ವಿಂಟಾಲ್ ಗರಿಷ್ಠ ಮಿತಿಯನ್ನು ತೆರವುಗೊಳಿಸಿ, ಪ್ರತಿ ರೈತರಿಂದ ಪ್ರತಿ ಎಕರೆಗೆ 10 ಕ್ವಿಂಟಾಲ್‌ನಂತೆ ರೈತರು ಹೊಂದಿರುವ ಜಮೀನಿಗೆ ಅನುಗುಣವಾಗಿ ಜೋಳವನ್ನು ಖರೀದಿಸಲು ಅನುಮತಿ ನೀಡಲಾಗಿದೆ. ಈಗಾಗಲೇ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಜೋಳವನ್ನು ಮಾರಾಟ ಮಾಡಿರುವ ರೈತರಿಂದ ಕೂಡಾ ಗರಿಷ್ಠ ಮಿತಿಯನ್ನು ಸಡಿಲಿಸಿ ಬಿಳಿಜೋಳ ಖರೀದಿಸಲು ಅವಕಾಶವನ್ನು ಕಲ್ಪಿಸಲಾಗಿದೆ.

ಉಳಿದಂತೆ ದಿನಾಂಕ: 14.12.2021 ಹಾಗೂ 28.01.2022 ರ ಆದೇಶದಲ್ಲಿನ ಎಲ್ಲಾ ಮಾರ್ಗಸೂಚಿಗಳನ್ನು ಮುಂದುವರೆಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಪಿ. ವೆಂಕಟೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ
ಆಹಾರ ನಾಗರಿಕ ಸರಬರಾಜು ಗ್ರಾಹಕರ ವ್ಯವಹಾರಗಳ
ಮತ್ತು ಕಾನೂನು ಮಾಪನಶಾಸ್ತ್ರ ಇಲಾಖೆ,

ಪ್ರತಿ:

1. ಪ್ರಧಾನ ಮಹಾಲೇಖಪಾಲರು (ಇ & ಆರ್.ಎಸ್.ಎ), ಕರ್ನಾಟಕ, ಹೊಸ ಕಟ್ಟಡ ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ: 5398,ಬೆಂಗಳೂರು-560001.
2. ಆಯುಕ್ತರು, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಬೆಂಗಳೂರು.

ಬಹು ಮಹಡಿ ಕಟ್ಟಡ, ಬೆಂಗಳೂರು.

3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಹಕಾರ ಇಲಾಖೆ, ಬಹು ಮಹಡಿ ಕಟ್ಟಡ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಮಾರುಕಟ್ಟೆ ಮಹಾಮಂಡಳಿ, ಬೆಂಗಳೂರು
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿ, ರಾಜಭವನ ರಸ್ತೆ, ಬೆಂಗಳೂರು.
7. ವ್ಯವಸ್ಥಾಪಕ ನಿರ್ದೇಶಕರು (ಕೆ.ಟಿ.ಕೆ), ಭಾರತ ಆಹಾರ ನಿಗಮ, ಬೆಂಗಳೂರು.
8. ಸಂಬಂಧಪಟ್ಟ ಜಿಲ್ಲೆಯ ಜಂಟಿ ನಿರ್ದೇಶಕರು /ಉಪ ನಿರ್ದೇಶಕರು , ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ
ಇವರ ಮುಖಾಂತರ)
ವ್ಯವಹಾರಗಳ ಇಲಾಖೆ, (ಆಯುಕ್ತರು, ಆನಾಸ & ಗ್ರಾವ್ಯ ಇಲಾಖೆ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ,
9. ಸಂಬಂಧಪಟ್ಟ ಜಿಲ್ಲೆಯ ವ್ಯವಸ್ಥಾಪಕರು, ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ, ಬೆಂಗಳೂರು ಇವರ
(ವ್ಯವಸ್ಥಾಪಕ ನಿರ್ದೇಶಕರು ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ,
ಮುಖಾಂತರ)
10. ಶಾಖಾ ರಕ್ಷಾ ಕಡತ /ಹೆಚ್ಚುವರಿ ಪ್ರತಿ.

**ಪ್ರತಿ ಮಾಹಿತಿಗಾಗಿ:**

1. ಸನ್ಮಾನ್ಯ ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿಗಳ, ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.

<u>ಕರ್ನಾಟಕ ಸರ್ಕಾರದ ನಡವಳಿಗಳು</u>

**ವಿಷಯ:** ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ 2021-22ನೇ ಸಾಲಿನ ಮುಂಗಾರು ಋತುವಿನಲ್ಲಿ ರಾಜ್ಯದ ರೈತರಿಂದ ರಾಗಿ ಮತ್ತು ಜೋಳ ಖರೀದಿ ಮಾಡುವ ಬಗ್ಗೆ.

**ಓದಲಾಗಿದೆ:**-1.ಕೇಂದ್ರ ಸರ್ಕಾರದ ಪತ್ರ ಸಂಖ್ಯೆ:3(19)/2020-ಪಿವೈ-I, ದಿನಾಂಕ: 16.06.2021

2. ಸಚಿವ ಸಂಪುಟ ಉಪಸಮಿತಿ ಸಭೆಯ ನಡವಳಿ ದಿನಾಂಕ: 24.11.2021.

3. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: 7-13/2021-py-III(378121),

ದಿನಾಂಕ: 14.12.2021.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಸಂಖ್ಯೆ(1) ರಲ್ಲಿನ ಪತ್ರದಲ್ಲಿ ಕೇಂದ್ರ ಸರ್ಕಾರವು 2021-22ನೇ ಸಾಲಿಗೆ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರೈತರಿಂದ ಖರೀದಿಸುವ ರಾಗಿ ಮತ್ತು ಬಿಳಿಜೋಳ ಆಹಾರಧಾನ್ಯಗಳಿಗೆ ಈ ಕೆಳಕಂಡಂತೆ ದರ ನಿಗದಿಪಡಿಸಿದೆ.

| ಕ್ರ.ಸಂ | ಧಾನ್ಯ | ದರ (ಪ್ರತಿ ಕ್ವಿಂಟಾಲ್ ಗೆ)ರೂ.ಗಳಲ್ಲಿ |
|---|---|---|
| 1 | ಬಿಳಿಜೋಳ-ಹೈಬ್ರಿಡ್ | 2738-00 |
| 2 | ಬಿಳಿಜೋಳ-ಮಾಲ್ದಂಡಿ | 2758-00 |
| 3 | ರಾಗಿ | 3377-00 |

ಮೇಲೆ ಓದಲಾದ (2)ರಲ್ಲಿನ ಸಚಿವ ಸಂಪುಟ ಉಪ ಸಮಿತಿಯ ಸಭೆಯಲ್ಲಿ ಕೈಗೊಂಡ ತೀರ್ಮಾನಗಳ ನಡವಳಿಯಲ್ಲಿ 2021-22ನೇ ಸಾಲಿನಲ್ಲಿ ಕನಿಷ್ಠ ಬೆಂಬಲ ಯೋಜನೆಯಡಿ ರಾಜ್ಯದ ರೈತರಿಂದ 2.1 ಲಕ್ಷ ಮೆಟ್ರಿಕ್ ಟನ್ ರಾಗಿ ಮತ್ತು 2.00 ಲಕ್ಷ ಮೆಟ್ರಿಕ್ ಟನ್ ಜೋಳವನ್ನು ಖರೀದಿ ಮಾಡಲು ಅನುಮೋದನೆಯನ್ನು ನೀಡಿದೆ.

ಮೇಲೆ ಓದಲಾದ (3) ರಲ್ಲಿನ ಪತ್ರದಲ್ಲಿ ಕೇಂದ್ರ ಸರ್ಕಾರವು 2021-22ನೇ ಸಾಲಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರಾಜ್ಯದ ರೈತರಿಂದ 2.1 ಲಕ್ಷ ಮೆಟ್ರಿಕ್ ಟನ್ ರಾಗಿ ಮತ್ತು 1.10 ಲಕ್ಷ ಮೆಟ್ರಿಕ್ ಟನ್ ಜೋಳವನ್ನು ಖರೀದಿಸಲು ಅನುಮತಿಯನ್ನು ನೀಡಿದೆ.

2021-22ನೇ ಸಾಲಿನ ಮುಂಗಾರು ಋತುವಿನಲ್ಲಿ ರೈತರು ಬೆಳೆದಿರುವ ಆಹಾರ ಧಾನ್ಯಗಳ ಖರೀದಿಗೆ ಸಂಬಂಧಿಸಿದಂತೆ ಈಗಾಗಲೇ ಕೃಷಿ ಇಲಾಖೆಯಿಂದ ಜಾರಿಗೊಳಿಸಿರುವ "ಫ್ರೂಟ್ಸ್" ದತ್ತಾಂಶದಿಂದ ರೈತರ ಮಾಹಿತಿಯನ್ನು ನೇರವಾಗಿ ಪಡೆದು, ಕೃಷಿ ಇಲಾಖೆ ಒದಗಿಸಿರುವ ಸರಾಸರಿ ಬೆಳೆ ಮಾಹಿತಿಯನ್ವಯ ಹಾಗೂ ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ವಯ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಆಹಾರಧಾನ್ಯವನ್ನು ಮಾರಾಟ ಮಾಡಲು ನೋಂದಣಿ ಮಾಡಿದಂತಹ ರೈತರಿಂದ ರಾಗಿ ಮತ್ತು ಬಿಳಿಜೋಳವನ್ನು ಸಂಗ್ರಹಣಾ ಏಜೆನ್ಸಿಗಳಾದ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ ಮತ್ತು ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳಗಳ ಮೂಲಕ ಖರೀದಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ, ಈ ಕೆಳಕಂಡ ಆದೇಶ:

**ಸರ್ಕಾರದ ಆದೇಶ ಸಂಖ್ಯೆ: ಆನಾಸ 57 ಆರ್ ಪಿಆರ್ 2021ಭಾ-2(ಇ-ಆಫೀಸ್)**

**ಬೆಂಗಳೂರು, ದಿನಾಂಕ:14.12.2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ 2021-22 ನೇ ಸಾಲಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರಾಜ್ಯದ ಸಣ್ಣ ಮತ್ತು ಅತಿ ಸಣ್ಣ ರೈತರಿಂದ 2.1 ಲಕ್ಷ ಮೆಟ್ರಿಕ್ ಟನ್ ರಾಗಿಯನ್ನು ಪ್ರತಿ ಕ್ವಿಂಟಾಲ್ ಗೆ

ರೂ.3377 ರ ದರದಲ್ಲಿ ಹಾಗೂ 1.10 ಲಕ್ಷ ಮೆಟ್ರಿಕ್ ಟನ್ ಜೋಳವನ್ನು (ಬಿಳಿಜೋಳ ಹೈಬ್ರಿಡ್-ರೂ.2738 ಹಾಗೂ ಬಿಳಿಜೋಳ ಮಾಲ್ದಂಡಿ-ರೂ.2758) ಖರೀದಿಸಲು ಅನುಮತಿಯನ್ನು ನೀಡಿದೆ.

2021-22 ನೇ ಸಾಲಿಗೆ ರೈತರಿಂದ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರಾಗಿ ಮತ್ತು ಜೋಳವನ್ನು ಖರೀದಿಸಲು ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತ ಮತ್ತು ಕರ್ನಾಟಕ ರಾಜ್ಯ ಸಹಕಾರ ಮಾರುಕಟ್ಟೆ ಮಹಾ ಮಂಡಳಿ ಗಳನ್ನು ಸಂಗ್ರಹಣಾ ಏಜೆನ್ಸಿಗಳನ್ನಾಗಿ ನೇಮಿಸಿ, ಈ ಕೆಳಕಂಡಂತೆ ಜಿಲ್ಲೆಗಳನ್ನು ಹಂಚಿಕೆ ಮಾಡಲಾಗಿದೆ. ಆಯಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ನೀಡುವ ಸೂಚನೆ/ಆದೇಶಗಳನ್ವಯ ಖರೀದಿ ಪ್ರಕ್ರಿಯೆಯನ್ನು ಕೈಗೊಳ್ಳಲು ಆದೇಶಿಸಿದೆ.

| ಕ್ರ.ಸಂ | ಸಂಗ್ರಹಣಾ ಸಂಸ್ಥೆ | ನಿಯೋಜಿಸಿರುವ ಜಿಲ್ಲೆ |
|---|---|---|
| 1 | ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ | ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಕೋಲಾರ, ಶಿವಮೊಗ್ಗ, ರಾಮನಗರ, ಚಿಕ್ಕಬಳ್ಳಾಪುರ, ರಾಯಚೂರು, ಹಾವೇರಿ, ಕೊಪ್ಪಳ, ವಿಜಯಪುರ, ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ, ದಾವಣಗೆರೆ, ಬಾಗಲಕೋಟೆ, ತುಮಕೂರು, ಚಿತ್ರದುರ್ಗ, ಕಲಬುರಗಿ, ಬಳ್ಳಾರಿ, ಬೀದರ್, ಯಾದಗಿರಿ. |
| 3 | ಕರ್ನಾಟಕ ರಾಜ್ಯ ಸಹಕಾರ ಮಾರುಕಟ್ಟೆ ಮಹಾಮಂಡಳಿ | ಹಾಸನ, ಬೆಳಗಾವಿ, ಧಾರವಾಡ, ಕೊಡಗು, ಗದಗ ಚಿಕ್ಕಮಗಳೂರು, ಚಾಮರಾಜನಗರ, ಮಂಡ್ಯ ಮತ್ತು ಮೈಸೂರು |

ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರಾಗಿ ಮತ್ತು ಜೋಳದ ಖರೀದಿಗೆ ದಿನಾಂಕ: 01-01-2022 ರಿಂದ ದಿನಾಂಕ: 31-03-2022 ರ ಅವಧಿಯನ್ನು ನಿಗಧಿಪಡಿಸಲಾಗಿದೆ. ಎಲ್ಲಾ ಜಿಲ್ಲೆಗಳಲ್ಲಿ ಖರೀದಿಗೆ ಸಂಬಂಧಿಸಿದಂತೆ ಸಂಗ್ರಹಣಾ ಏಜೆನ್ಸಿಗಳು ತಕ್ಷಣದಿಂದ ಜಾರಿಗೆ ಬರುವಂತೆ ರೈತರ ನೊಂದಣಿ ಕಾರ್ಯವನ್ನು ಹಾಗೂ ಖರೀದಿ ಕೇಂದ್ರಗಳನ್ನು ತೆರೆಯತಕ್ಕದ್ದು. ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಲಾಗುವ ಟಾಸ್ಕ್‌ಫೋರ್ಸ್ ಸಮಿತಿಯು ಕೂಡಲೇ ಖರೀದಿಗೆ ಸಂಬಂಧಿಸಿದ ಅಗತ್ಯ ಪ್ರಕ್ರಿಯೆಗಳನ್ನು ಪ್ರಾರಂಭಿಸಲು ಕ್ರಮವಹಿಸತಕ್ಕದ್ದು.

ಸದರಿ ಖರೀದಿಗೆ ಅವಶ್ಯವಿರುವ ದತ್ತಾಂಶ/ತಂತ್ರಾಂಶವನ್ನು ಆಯುಕ್ತರು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಇವರು ಎನ್.ಐ.ಸಿ ಸಹಯೋಗದೊಂದಿಗೆ ಸಿದ್ಧಪಡಿಸತಕ್ಕದ್ದು, ಹಾಗೂ ಕೇಂದ್ರ ಸರ್ಕಾರದ ಪೋರ್ಟಲ್‌ನಲ್ಲಿ ಅಗತ್ಯ ದತ್ತಾಂಶವನ್ನು ದಾಖಲಿಸತಕ್ಕದ್ದು.

## ರಾಗಿ ಮತ್ತು ಬಿಳಿಜೋಳ ಖರೀದಿಗೆ ಮಾರ್ಗಸೂಚಿಗಳು

1. ಸರ್ಕಾರದಿಂದ ನೇಮಿಸಲ್ಪಟ್ಟ ಖರೀದಿ ಏಜೆನ್ಸಿಗಳು ರಾಗಿ ಮತ್ತು ಬಿಳಿಜೋಳವನ್ನು ಖರೀದಿ ಹಂತದಲ್ಲಿ ಕೇಂದ್ರ ಸರ್ಕಾರವು ನಿಗಧಿಪಡಿಸಿದ ಮಾನದಂಡಗಳನ್ವಯ ಎಫ್.ಎ.ಕ್ಯೂ ಗುಣಮಟ್ಟವನ್ನು ದೃಡೀಕರಿಸಲು ಈ ಕೆಳಗಿನಂತೆ ಕ್ರಮವಹಿಸುವುದು.
2. ಪ್ರತಿ ಖರೀದಿ ಕೇಂದ್ರಕ್ಕೆ ಕೃಷಿ ಇಲಾಖೆಯ ಗ್ರೇಡರ್‌ಗಳನ್ನು ನೇಮಿಸುವುದು.
3. ಪ್ರತಿ ಖರೀದಿ ಕೇಂದ್ರಗಳಲ್ಲಿ ಕೃಷಿ ಇಲಾಖೆಯ ಗ್ರೇಡರ್ ಗಳೊಂದಿಗೆ ಆಹಾರ ಧಾನ್ಯಗಳನ್ನು ಗುಣಮಟ್ಟವನ್ನು ಜಂಟಿಯಾಗಿ ದೃಡೀಕರಿಸಲು ಮೂರನೇ ವ್ಯಕ್ತಿ ಗುಣಮಟ್ಟ ಪರಿಷ್ಕರಣಾ ಸಂಸ್ಥೆಗಳನ್ನು ನಿಯಮಾನುಸಾರ ನೇಮಿಸಿಕೊಳ್ಳಲು ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮವು ಎಲ್ಲಾ ಸಂಗ್ರಹಣಾ ಸಂಸ್ಥೆಗಳ ಪರವಾಗಿ ಅಲ್ಪಾವಧಿ ಟೆಂಡರ್ ಕರೆಯುವುದು.

4. ಖರೀದಿ ಏಜೆನ್ಸಿಯ ಹಿರಿಯ ಅಧಿಕಾರಿಗಳು ಆಗ್ಗಿಂದಾಗ್ಗೆ ಮೇಲುಸ್ತುವಾರಿ ತಪಾಸಣೆ ಕೈಗೊಳ್ಳುವುದು ಹಾಗೂ ಖರೀದಿ ಏಜೆನ್ಸಿಗಳು ರೈತರಿಂದ ಖರೀದಿ ಮಾಡುವ ರಾಗಿ ಮತ್ತು ಬಿಳಿಜೋಳವನ್ನು ರೈತರು ತುಂಬಿಸಿ ತರುವ ಒಮ್ಮೆ ಬಳಸಿದ ಉತ್ತಮ ಗುಣಮಟ್ಟದ ಗೋಣಿ ಚೀಲದಲ್ಲಿಯೇ ಖರೀದಿಸಲು ಮತ್ತು ಗೋಣಿ ಚೀಲ ಖರೀದಿ ವೆಚ್ಚ ಪ್ರತಿ 50 ಕೆ.ಜಿ ಚೀಲಕ್ಕೆ ರೂ.22/- ರಂತೆ ನೇರ ನಗದು ವರ್ಗಾವಣೆ (Direct Benifit transfer) ಮೂಲಕ ರೈತರಿಗೆ ಪಾವತಿಸುವುದು ಮತ್ತು ರೈತರಿಂದ ಖರೀದಿಸುವ ಗೋಣಿಚೀಲವು ಉತ್ತಮ ಗುಣಮಟ್ಟವಾಗಿರುವುದನ್ನು ಸಂಗ್ರಹಣಾ ಏಜೆನ್ಸಿಗಳು ಖಾತರಿಪಡಿಸಿಕೊಳ್ಳತಕ್ಕದ್ದು.
5. ಪ್ರತಿ ರೈತರಿಂದ ಉತ್ಪಾದನೆಗೆ ಅನುಗುಣವಾಗಿ ಪ್ರತಿ ಎಕರೆಗೆ 10 ಕ್ವಿಂಟಾಲ್‌ನಂತೆ ಗರಿಷ್ಠ 20 ಕ್ವಿಂಟಾಲ್ ರಾಗಿ ಹಾಗೂ ಪ್ರತಿ ಎಕರೆಗೆ 10 ಕ್ವಿಂಟಾಲ್‌ನಂತೆ ಗರಿಷ್ಠ 20 ಕ್ವಿಂಟಾಲ್ ಜೋಳವನ್ನು ಖರೀದಿಸುವುದು.
6. ಸರ್ಕಾರವು ನಿಗಧಿಪಡಿಸಿರುವ ಪ್ರಮಾಣವನ್ನು ಮೀರಿ ಹೆಚ್ಚುವರಿಯಾಗಿ ರಾಗಿ ಹಾಗೂ ಜೋಳವನ್ನು ಖರೀದಿಸುವಂತಿಲ್ಲ.
7. ರಾಜ್ಯದಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯ ಅನುಷ್ಠಾನದಲ್ಲಿ ಅಪರ ನಿರ್ದೇಶಕರು-1, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಇವರು ರಾಜ್ಯ ಮಟ್ಟದ ನೋಡಲ್ ಅಧಿಕಾರಿಯಾಗಿ ಕಾರ್ಯನಿರ್ವಹಿಸಲು ನೇಮಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

([illegible] ವೆಂಕಟೇಶ್)

ಸರ್ಕಾರದ ಅಧೀನ ಕಾರ್ಯದರ್ಶಿ
ಆಹಾರ ನಾಗರಿಕ ಸರಬರಾಜು ಗ್ರಾಹಕರ ವ್ಯವಹಾರಗಳ
ಮತ್ತು ಕಾನೂನು ಮಾಪನಶಾಸ್ತ್ರ ಇಲಾಖೆ,

1. ಪ್ರಧಾನ ಮಹಾಲೇಖಪಾಲರರು (ಎ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329,ಬೆಂಗಳೂರು-560001.
2. ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
3. ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಹಕಾರ ಇಲಾಖೆ, ಬಹು ಮಹಡಿ ಕಟ್ಟಡ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿ, ಕೃಷಿ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಆಯುಕ್ತರು, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಬೆಂಗಳೂರು.
7. ಎಲ್ಲಾ ಜಿಲ್ಲಾಧಿಕಾರಿಗಳು.
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ, ಬೆಂಗಳೂರು.
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಮಾರುಕಟ್ಟೆ ಮಹಾಮಂಡಳಿ, ಬೆಂಗಳೂರು
10. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳ, ರಾಜಭವನ ರಸ್ತೆ, ಬೆಂಗಳೂರು.
11. ವ್ಯವಸ್ಥಾಪಕ ನಿರ್ದೇಶಕರು (ಕೆ.ಟಿ.ಕೆ), ಭಾರತ ಆಹಾರ ನಿಗಮ, ಬೆಂಗಳೂರು.

12. ಅಪರ ನಿರ್ದೇಶಕರು-1, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಬೆಂಗಳೂರು.
13. ಸಂಬಂಧಪಟ್ಟ ಜಿಲ್ಲೆಯ ಜಂಟಿ ನಿರ್ದೇಶಕರು /ಉಪ ನಿರ್ದೇಶಕರು , ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, (ಆಯುಕ್ತರು, ಆನಾಸ & ಗ್ರಾವ್ಯ ಇಲಾಖೆ ಇವರ ಮುಖಾಂತರ)
14. ಸಂಬಂಧಪಟ್ಟ ಜಿಲ್ಲೆಯ ವ್ಯವಸ್ಥಾಪಕರು, ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ, (ವ್ಯವಸ್ಥಾಪಕ ನಿರ್ದೇಶಕರು ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ, ಬೆಂಗಳೂರು ಇವರ ಮುಖಾಂತರ)
15. ಶಾಖಾ ರಕ್ಷಾ ಕಡತ /ಹೆಚ್ಚುವರಿ ಪ್ರತಿ.

**ಪ್ರತಿ ಮಾಹಿತಿಗಾಗಿ:**

1. ಸನ್ಮಾನ್ಯ ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿಗಳ, ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.